ಇ) ನಬಾರ್ಡ್ ಸಹಯೋಗದ ಆರ್‌ಐಡಿಎಫ್ ಯೋಜನೆಯಡಿ ಹಾಗೂ ರಾಜ್ಯ ಸರ್ಕಾರದ ಅಪೆಂಡಿಕ್ಸ್–ಇ ಯೋಜನೆಯಡಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡ ಮತ್ತು ಕೊಠಡಿಗಳನ್ನು ನೀಡಲಾಗುತ್ತಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜು, ಗೆಂಡೇಹಳ್ಳಿ ಈ ಕಾಲೇಜಿಗೆ ಸಂಬಂಧಿಸಿದಂತೆ ಅನುದಾನದ ಲಭ್ಯತೆಯನ್ನಾದರಿಸಿ ಕ್ರಮಕ್ಕೆಗೊಳ್ಳಲಾಗುವುದು.

ಪದವಿ ಮತ್ತು ಡಿಪ್ಲೊಮಾ ಕಾಲೇಜುಗಳು
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 37 : (07)

ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ)ಅ) ಹಳಿಯಾಳ ತಾಲ್ಲೂಕು ದಾಂಡೇಲಿ ನಗರದಲ್ಲಿ 38 ಸಾವಿರಾಗಳ ಜನಸಂಖ್ಯೆ ಇದ್ದು ಸರ್ಕಾರಿ ಪದವಿ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;
ಆ) ಹಾಗಿದ್ದಲ್ಲಿ, ಅವಶ್ಯವಾಗಿರುವ ಪದವಿ ಕಾಲೇಜನ್ನು ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಿ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;
ಇ) ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕುಗಳಲ್ಲಿ ಸರ್ಕಾರಿ ಪದವಿ ಕಾಲೇಜುಗಳಿದ್ದು, ಈ ಎರಡೂ ಕಾಲೇಜುಗಳಿಗೆ ಕಾಂಪೌಂಡ್ ಮತ್ತು ಆಟದ ಮೈದಾನ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;
ಈ) ಹಳಿಯಾಳ ತಾಲ್ಲೂಕಿನ ಡಿಪ್ಲೋಮಾ ಕಾಲೇಜು ಇಲ್ಲದಿರುವುದರಿಂದ ಬಹಳಷ್ಟು ವಿದ್ಯಾರ್ಥಿಗಳು ವ್ಯಾಸಂಗವನ್ನು ಅರ್ಧಕ್ಕೆ ಬಿಟ್ಟಿರುವ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿಯೇ ಡಿಪ್ಲೋಮೊ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ:

ಉ) ಹಳಿಯಾಳ ತಾಲ್ಲೂಕು ದಾಂಡೇಲಿಯಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭ ಮಾಡಲು ಬೇಡಿಕೆ ಇದ್ದು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇಂಜಿನಿಯರಿಂಗ್ ಕಾಲೇಜನ್ನು ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ:

ಶ್ರೀ ಸಿ.ಟಿ.ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಕಾಲೇಜಿನ ಅವಶ್ಯಕತೆಯ ಬಗ್ಗೆ ವಿದ್ಯಾರ್ಥಿಗಳ ಸಂಖ್ಯೆ ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಬಂದಿದೆ.

ಅನುದಾನದ ಲಭ್ಯತೆಯನ್ನು ಆಧರಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಈ) ಬಂದಿದೆ.

ರಾಜ್ಯದಲ್ಲಿ ಹೊಸ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್‌ಗಳನ್ನು ವಿವಿಧ ಕಡೆ ಪ್ರಾರಂಭಿಸುವ ಕುರಿತು ಅಗತ್ಯತೆ ಮತ್ತು ಅನುದಾನದ ಲಭ್ಯತೆ ಆಧರಿಸಿ ಕ್ರಮವಹಿಸಲಾಗುವುದು.

ಉ) ವಿದ್ಯಾರ್ಥಿಗಳ ಸಂಖ್ಯೆ ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.